**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಕೆ.ಪ್ರತಾಪಸಿಂಹ ನಾಯಕ್ ಇವರು ಶೂನ್ಯ ವೇಳೆಯಲ್ಲಿ "ಎತ್ತಿನಹೊಳೆ ಯೋಜನೆಯನ್ನು ಇನ್ನಷ್ಟು ವಿಸ್ತರಿಸುವ ಉದ್ದೇಶದಿಂದ ದಕ್ಷಿಣ ಕನ್ನಡ ಜಿಲ್ಲೆಯ ಮುಂದಿನ ದಿನಗಳಲ್ಲಿ ಕುಡಿಯುವ ನೀರು ಹಾಗೂ ಕೃಷಿಗೆ ಅಭಾವದಿಂದ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳು ಬರ ಪೀಡಿತ ಪ್ರದೇಶವಾಗುವ ಕುರಿತು" ಪ್ರಸ್ತಾಪಿಸಿರುವ ಪ್ರಸ್ತಾವಕ್ಕೆ ಮಾನ್ಯ ಉಪ ಮುಖ್ಯಮಂತ್ರಿಗಳ ಉತ್ತರ.**

******

ಪಶ್ಚಿಮಾಭಿಮುಖವಾಗಿ ಹರಿಯುವ ನೇತ್ರಾವತಿ, ಕಾಳಿ, ವರಾಹಿ, ಅಗನಾಶಿನಿ, ಬೇಡ್ತಿ, ಶರಾವತಿ, ಸೀತಾ ನದಿಗಳ ಜಲಾನಯನ ಪ್ರದೇಶವು ಪರ್ವತ ಶ್ರೇಣಿಗಳಿಂದ ಕೂಡಿದ್ದು, ಈ ನದಿಗಳಿಂದ ಸುಮಾರು 2000 ಟಿ.ಎಂ.ಸಿ ನೀರು ಉಪಯೋಗವಾಗದೆ ಕಡಿಮೆ ಸಮಯದಲ್ಲಿ ಅರಬ್ಬೀ ಸಮುದ್ರವನ್ನು ಸೇರುತ್ತದೆ.

ಸದರಿ ಪಶ್ಚಿಮಘಟ್ಟದ ಮೇಲ್ಭಾಗದಲ್ಲಿ ಹರಿಯುವ ಎತ್ತಿನಹೊಳೆ, ಕಾಡುಮನೆಹೊಳೆ, ಕೇರಿಹೊಳೆ ಮತ್ತು ಹೊಂಗದಹಳ್ಳದಿಂದ ಮುಂಗಾರು ಮಳೆ ಅವಧಿಯಲ್ಲಿ 24.01 ಟಿ.ಎಂ.ಸಿ ಪ್ರಮಾಣದ ಪ್ರವಾಹದ ನೀರನ್ನು 07 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ ಹಾಗೂ ಚಿಕ್ಕಮಗಳೂರಿನ ಬರಪೀಡಿತ 29 ತಾಲ್ಲೂಕಿನ 38 ಪಟ್ಟಣ ಪ್ರದೇಶದ ಹಾಗೂ 6657 ಗ್ರಾಮಗಳ ಸುಮಾರು 75.59 ಲಕ್ಷ (Projected population for 2023-24) ಜನರಿಗೆ ಮತ್ತು ಜಾನುವಾರುಗಳಿಗೆ 14.056 ಟಿ.ಎಂ.ಸಿ ಕುಡಿಯುವ ನೀರನ್ನು ಒದಗಿಸುವುದು ಹಾಗೂ 05 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಹಾಸನ, ತುಮಕೂರು ವ್ಯಾಪ್ತಿಯಲ್ಲಿ 527 ಕೆರೆಗಳಿಗೆ 9.953 ಟಿ.ಎಂ.ಸಿ ಪ್ರಮಾಣದ ನೀರನ್ನು ಕೆರೆಗಳ ಸಾಮರ್ಥ್ಯದ ಶೇ.50% ರಷ್ಟು ತುಂಬಿಸಿ ಅಂತರ್ಜಲ ಮರುಪೂರಣ ಮಾಡಲು ಉದ್ದೇಶಿಸಲಾಗಿರುವ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ರೂ.23,251.66 ಕೋಟಿ ಮೊತ್ತದ ಪುನರ್ ಪರಿಷ್ಕೃತ ಯೋಜನಾ ವರದಿಗೆ ದಿನಾಂಕ:10.01.2023 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಈ ಯೋಜನಾ ಕಾಮಗಾರಿಗಳನ್ನು 2 ಹಂತಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಹಂತ-1ರ ಕಾಮಗಾರಿಗಳನ್ನು ಪೂರ್ಣಗೊಳಿಸಿ ದಿನಾಂಕ: 06.09.2024 ರಂದು ಲೋಕಾರ್ಪಣೆ ಮಾಡಿದ್ದು, ಹಂತ-2ರ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ.

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ಪಶ್ಚಿಮಘಟ್ಟದ ಮೇಲ್ಭಾಗದಲ್ಲಿ ಹರಿಯುವ ಎತ್ತಿನಹೊಳೆ, ಕಾಡುಮನೆಹೊಳೆ, ಕೇರಿಹೊಳೆ ಮತ್ತು ಹೊಂಗದಹಳ್ಳದಿಂದ ಮುಂಗಾರು ಮಳೆ ಅವಧಿಯಲ್ಲಿ 24.01 ಟಿ.ಎಂ.ಸಿ ಪ್ರಮಾಣದ ಪ್ರವಾಹದ ನೀರನ್ನು 139 ದಿನಗಳು ಮಾತ್ರ ಲಿಫ್ಟ್ ಮಾಡಲು ಉದ್ದೇಶಿಸಿದ್ದು, ಉಳಿದ ಅವಧಿಯಲ್ಲಿ ಯೋಜನೆಯಡಿ ಸೃಜಿಸಲಾಗುತ್ತಿರುವ ಮೂಲಭೂತ ಸೌಕರ್ಯಗಳು ಬಳಕೆಯಾಗದೆ (Idle) ವ್ಯರ್ಥವಾಗುವುದರಿಂದ ಸದರಿ ಯೋಜನೆಯಡಿಯಲ್ಲಿ ಸೃಜಿಸಲಾಗುತ್ತಿರುವ ಮೂಲಭೂತ ಸೌಕರ್ಯಗಳನ್ನು ವರ್ಷವಿಡೀ ಪರಿಣಾಮಕಾರಿಯಾಗಿ ಬಳಸಿಕೊಂಡು, ಇವುಗಳನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಪಶ್ಚಿಮಾಭಿಮುಖವಾಗಿ ಹರಿಯುತ್ತಿರುವ ನದಿಗಳಲ್ಲಿ ಲಭ್ಯವಿರುವ ನೀರನ್ನು ಪರಿಸರಕ್ಕೆ ಧಕ್ಕೆಯಾಗದಂತೆ

ತಿರುವುಗೊಳಿಸಿ, ಎತ್ತಿನಹೊಳೆ ಯೋಜನೆ ಹಾಗೂ ಭದ್ರಾ ಮೇಲ್ದಂಡೆ ಯೋಜನೆಗಳಡಿ ಮಧ್ಯ ಕರ್ನಾಟಕ ಮತ್ತು ಪೂರ್ವ ಭಾಗದ ಜಿಲ್ಲೆಗಳಿಗೆ ನೀರನ್ನು ಪೂರೈಸುವ ನಿಟ್ಟಿನಲ್ಲಿ ತಾಂತ್ರಿಕವಾಗಿ ಮತ್ತು ಆರ್ಥಿಕವಾಗಿ ಕಾರ್ಯಸಾಧುವಾಗುವ ಕಾರ್ಯಸಾಧ್ಯತಾ ವರದಿಯನ್ನು (Feasibility report) ತಯಾರಿಸಲು ದಿನಾಂಕ:30.10.2023 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 29ನೇ ಸಭೆಯಲ್ಲಿ ನಿರ್ದೇಶಿಸಲಾಗಿದೆ.

ಈ ಹಿನ್ನಲೆಯಲ್ಲಿ ನೇತ್ರಾವತಿ ಜಲಾನಯನ ಪ್ರದೇಶದಿಂದ ವ್ಯರ್ಥವಾಗಿ ಸಮುದ್ರವನ್ನು ಸೇರುತ್ತಿರುವ ಹೆಚ್ಚುವರಿ ನೀರನ್ನು ಮಾತ್ರ ತಿರುವುಗೊಳಿಸಿ ಪ್ರಸ್ತುತ ನಿಗಮದ ಎತ್ತಿನಹೊಳೆ ಯೋಜನೆಯಡಿ ಸೃಜಿಸಲಾಗುತ್ತಿರುವ ಮೂಲಭೂತ ಸೌಕರ್ಯಗಳನ್ನು ವರ್ಷವಿಡೀ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ತಾಂತ್ರಿಕ ಮತ್ತು ಆರ್ಥಿಕವಾಗಿ ಸಾಧುವಾಗುವ ಕಾರ್ಯಸಾಧ್ಯತಾ ವರದಿಯನ್ನು (Feasibility report) ತಯಾರಿಸಲು ಕ್ರಮ ವಹಿಸಲಾಗುತ್ತಿದೆ. ಸದರಿ ಅಧ್ಯಯನವನ್ನು ದಕ್ಷಿಣ ಕನ್ನಡ ಜಿಲ್ಲೆಯ ನದಿಗಳಿಗೆ ಕಂಟಕವಾಗದಂತೆ, ಪಶ್ಚಿಮಘಟ್ಟದಲ್ಲಿನ ಮಳೆಕಾಡು ಮತ್ತು ಹುಲ್ಲುಗಾವಲುಗಳ ನಾಶವಾಗದಂತೆ, ದಟ್ಟಾರಣ್ಯದಲ್ಲಿ ನದಿಗಳ ಸಹಜ ಹರಿವಿನ ಮೇಲೆ ದುಷ್ಪರಿಣಾಮ ಬೀರದಂತೆ, ಭೂಕುಸಿತ ಮತ್ತು ಅಂತರ್ಜಲ ಕುಸಿತದಂಥ ಅಪಾಯಗಳಿಗೆ ಕಾರಣವಾಗದಂತೆ, ಪಶ್ಚಿಮಘಟ್ಟದ ಸೂಕ್ಷ್ಮ ಪದರಗಳಿಗೆ ಶಾಶ್ವತ ಹಾನಿಯಾಗದಂತೆ, ಪಶ್ಚಿಮಘಟ್ಟಕ್ಕೆ ಮಾರಕವಾಗದಂತೆ, ಅಲ್ಲದೇ ಕರಾವಳಿ ಮತ್ತು ಮಲೆನಾಡಿಗೆ ನೀರಿನ ಯಾವುದೇ ತೊಂದರೆಯಾಗದಂತೆ ಕೈಗೊಳ್ಳಲಾಗುತ್ತಿದೆ.

**ಸಂಖ್ಯೆ: ಜಸಂಇ 37 ಡಬ್ಲ್ಯೂಎಲ್ಎ 2025**

**(ಡಿ.ಕೆ.ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**